# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## SC No. 41/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ದಯಾನಂದ ಕೆ** | **PW - 13** |
| ತಂದೆಯ ಹೆಸರು | : | **ಅಪ್ಪಣ್ಣ ಕೆ** | **CW - 16** |
| ವಯಸ್ಸು | : | **31 ವರ್ಷ** | |
| ವೃತ್ತಿ | : | **ಚಾಲಕ** | |
| ವಾಸ | : | **ಕುಂದಚೇರಿ ಗ್ರಾಮ, ಮಡಿಕೇರಿ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 17-04-2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ಪ್ರಾಸಾ-1, ಪ್ರಾಸಾ-2, ಹಾಗೂ ಆರೋಪಿ ಇವರ ಪರಿಚಯ ಇರುತ್ತದೆ. ನಂದೀಶ್ ಮೃತ ಪಟ್ಟ ಬಗ್ಗೆ ನನಗೆ ಮಾಹಿತಿ ಇರುತ್ತದೆ. ನಂದೀಶ್ ಇವರು ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ ಎಂದು ವಿಷಯ ತಿಳಿದು ಅಲ್ಲಿಗೆ ಹೋಗಿ ಮೃತ ಶರೀರ ನೋಡಿರುತ್ತೇನೆ. ಪೊಲೀಸರು ಶವಪಂಚನಾಮೆ ಮಾಡಿರುವುದು ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ. ನಂದೀಶ್ ಕೊಲೆ ಆದ ಬಗ್ಗೆ ನಾನು ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟೀಸವಾಲು- ಸರ್ಕಾರಿ ಅಭಿಯೋಜಕರಿಂದಃ</u>**

1. ದಿನಾಂಕ 27.11.2023 ರಂದು ನಾನು ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಯಲ್ಲಿ ನಂದೀಶನ ಶವವನ್ನು ನೋಡಿದಾಗ ಪೊಲೀಸರು

ಶವಪಂಚನಾಮೆ ಮಾಡಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ಶವಪಂಚನಾಮೆಯನ್ನು **ನಿಪಿ-25** ಎಂದು ಗುರುತಿಸಲಾಯಿತು. ಶವಪಂಚನಾಮೆ ಸಮಯದಲ್ಲಿ ನಾನು ಪೊಲೀಸರಿಗೆ ಆರೋಪಿತನು ಮೃತ ನಂದೀಶನೊಂದಿಗೆ ಆಗಾಗ ಆಸ್ತಿ ವಿಚಾರವಾಗಿ ಜಗಳ ಮಾಡುತ್ತಿದ್ದ ಬಗ್ಗೆ ಹೇಳಿಕೆ ನೀಡಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ದಿನಾಂಕ 25.11.2023 ರಂದು ರಾತ್ರಿ 8.30 ಗಂಟೆಗೆ ಆರೋಪಿತನು ನಂದೀಶನನ್ನು ಕತ್ತಿಯಿಂದ ಹಲ್ಲೆ ಮಾಡಿದ್ದರಿಂದ ನಂದೀಶನು ಮೃತ ಪಟ್ಟಿದನು ಎಂದು ಸೂಚಿಸುವುದು ಸರಿಯಲ್ಲ. ಆ ಬಗ್ಗೆ ನಾನು ಶವಪಂಚನಾಮೆ ಕಾಲಕ್ಕೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಈಗೆ ಓದಿ ಹೇಳಿದಂತೆ "ನಾನು ಈ ಮೇಲಿನ ವಿಳಾಸದಲ್ಲಿ .................... ಮರಣೋತ್ತರ ಪರೀಕ್ಷೆಯಿಂದ ತಿಳಿಯಬಯಸುತ್ತೇನೆ" ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ಸದರಿ ಹೇಳಿಕೆಯನ್ನು **ನಿಪಿ-25(ಎ)** ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲು- ಆರೋಪಿ ಪರ ವಕೀಲರಾದ ಶ್ರೀ. ಓ.ಎಸ್.ಸಿ ರವರಿಂದಃ</u>**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆಃ</u>** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.